ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 568 ಸೇನೇನಿ 2015

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ: 25/02/2017

**ಸುತ್ತೋಲೆ**

ವಿಷಯ : ರಾಜ್ಯ ನಾಗರಿಕ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿ ಅಧಿಸೂಚನೆಯ ವಿವರಗಳನ್ನು ಕಡ್ಡಾಯವಾಗಿ ಕರ್ನಾಟಕ ಸರ್ಕಾರದ www.karnataka.gov.in ನ ಜಾಲತಾಣದಲ್ಲಿ ಪ್ರಕಟಿಸುವ ಬಗ್ಗೆ

*****

ಕರ್ನಾಟಕ ಸರ್ಕಾರ ಸಚಿವಾಲಯ ಸೇರಿದಂತೆ, ಸಚಿವಾಲಯದ ಇತರ ಎಲ್ಲಾ ಆಡಳಿತ ಇಲಾಖೆಗಳ ವ್ಯಾಪ್ತಿಗೊಳಪಡುವ ಕ್ಷೇತ್ರ ಇಲಾಖೆಗಳು ರಾಜ್ಯ ನಾಗರಿಕ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲು ಕರ್ನಾಟಕ ಲೋಕಸೇವಾ ಆಯೋಗ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸೇರಿದಂತೆ ಇತರೆ ಆಯ್ಕೆ ಪ್ರಾಧಿಕಾರಗಳಿಗೆ ವಹಿಸಲಾಗುತ್ತದೆ. ಆಯ್ಕೆ ಪ್ರಾಧಿಕಾರಗಳು ನೇಮಕಾತಿ ಅಧಿಸೂಚನೆಯನ್ನು ಆಯಾ ಆಯ್ಕೆ ಪ್ರಾಧಿಕಾರದ ಜಾಲತಾಣ(website)ದಲ್ಲಿ ಪ್ರಕಟಿಸಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಿ, ಅರ್ಹ ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳಿಗೆ ಕಳುಹಿಸಿಕೊಡುತ್ತವೆ.

ಆದರೆ, ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡಲು ಪ್ರಕಟಿಸುವ ನೇಮಕಾತಿ ಅಧಿಸೂಚನೆಗಳನ್ನು ಸಂಬಂಧಪಟ್ಟ ಆಯ್ಕೆ ಪ್ರಾಧಿಕಾರದ ಜಾಲತಾಣದಲ್ಲಿ ಮಾತ್ರ ಪ್ರಕಟಿಸಲಾಗುತ್ತಿದೆ. ಇದರಿಂದಾಗಿ ಸಾರ್ವಜನಿಕರು ರಾಜ್ಯ ನಾಗರಿಕ ಸೇವೆಯಲ್ಲಿ ಖಾಲಿ ಇರುವ ನೇರನೇಮಕಾತಿ ಹುದ್ದೆಗಳಿಗೆ ಮಾಡುವ ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿರುವುದಿಲ್ಲ.

ಪು.ತಿ.ನೋ...2

ಮೇಲ್ಕಂಡ ಅಂಶಗಳನ್ನು ಪರಿಗಣಿಸಿ ಕರ್ನಾಟಕ ಸರ್ಕಾರ ಸಚಿವಾಲಯ ಸೇರಿದಂತೆ, ಸಚಿವಾಲಯದ ಎಲ್ಲಾ ಆಡಳಿತ ಇಲಾಖೆಗಳ ವ್ಯಾಪ್ತಿಗೊಳಪಡುವ ಕ್ಷೇತ್ರ ಇಲಾಖೆಗಳು / ಸಂಸ್ಥೆಗಳು ಇನ್ನುಮುಂದೆ ರಾಜ್ಯ ನಾಗರಿಕ ಸೇವೆಯ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡಲು ಹೊರಡಿಸುವ ಎಲ್ಲಾ ನೇಮಕಾತಿ ಅಧಿಸೂಚನೆಗಳನ್ನು ಸಂಬಂಧಪಟ್ಟ ಸಚಿವಾಲಯದ ಆಡಳಿತ ಇಲಾಖೆಗಳು ಕ್ಷೇತ್ರ ಇಲಾಖೆಗಳಿಂದ ಮಾಹಿತಿ ಪಡೆದು ನೇಮಕಾತಿ ಅಧಿಸೂಚನೆ ಹೊರಡಿಸಿದ ಒಂದು ದಿನದೊಳಗಾಗಿ ಕಡ್ಡಾಯವಾಗಿ ರಾಜ್ಯ ಸರ್ಕಾರದ www.karnataka.gov.in ಜಾಲತಾಣದಲ್ಲಿ ಅಳವಡಿಸಲು (upload) ಕ್ರಮಕೈಗೊಳ್ಳುವಂತೆ ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರಿಗೆ ತಿಳಿಸಲಾಗಿದೆ.

(ಟಿ.ಕೆ.ಅನಿಲ್‌ಕುಮಾರ್)
ಸರ್ಕಾರದ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 25/02/2017ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 200 ಪ್ರತಿಗಳನ್ನು ಒದಗಿಸಲು.

**ಇವರಿಗೆ:**

1. ಸರ್ಕಾರದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
2. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
3. ಎಲ್ಲಾ ಇಲಾಖಾ ಮುಖ್ಯಸ್ಥರು
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
5. *ಮಹಾನಿಬಂಧಕರು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು
6. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
7. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
8. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
9. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
10. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
11. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
12. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
13. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು (* ಮುಖ ಪತ್ರದೊಂದಿಗೆ)